ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆಯ ಸಮಿತಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 11/11/20

# ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳಿಗೆ ಅಧ್ಯಕ್ಷರ ನೇಮಕ

11/11/20

**ಸಂ.ಕ.ಸಮಾಚಾರ ಬೆಂಗಳೂರು**

2020-21ನೇ ಸಾಲಿನ ವಿಧಾನಮಂಡಲದ ವಿವಿಧ ಸ್ಥಾಯಿಸಮಿತಿ ಹಾಗೂ ಜಂಟಿ ಸಮಿತಿಗಳನ್ನು ರಚನೆ ಮಾಡಲಾಗಿದ್ದು ವಿಧಾನಸಭೆ ಮತ್ತು ವಿಧಾನ ಪರಿಷತ್‌ನ ಸದಸ್ಯರನ್ನು ನಾಮನಿರ್ದೇಶನಗೊಳಿಸಲಾಗಿದೆ.

ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ ಶಾಸಕ ರಾಮಲಿಂಗಾರೆಡ್ಡಿ ಅಧ್ಯಕ್ಷರಾಗಿದ್ದು ವಿಧಾನಸಭೆಯ 15 ಹಾಗೂ ಮೇಲ್ಮನೆಗೆ ಐವರು ಸದಸ್ಯರನ್ನು ನೇಮಕಮಾಡಲಾಗಿದೆ. ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಶಾಸಕ ಅರವಿಂದ ಲಿಂಬಾವಳಿ ಅಧ್ಯಕ್ಷರಾಗಿದ್ದಾರೆ. ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಎಸ್.ಅಂಗಾರ ಅಧ್ಯಕ್ಷರಾಗಿರುತ್ತಾರೆ. ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಶಾಸಕ ದಿನಕರ್‌ಶೆಟ್ಟಿ ಅಧ್ಯಕ್ಷರಾಗಿದ್ದಾರೆ.

ಅಧೀನ ಶಾಸನ ರಚನಾ ಸಮಿತಿಗೆ ಕುಮಾರ್ ಬಂಗಾರಪ್ಪ, ಸಭೆಯ ಮುಂದಿಡಲಾದ ಕಾಗದಪತ್ರಗಳ ಸಮಿತಿಗೆ ಸಾ.ರಾ.ಮಹೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಗೆ ಶಾಸಕಿ ಕೆ.ಪೂರ್ಣಿಮಾ ಅಧ್ಯಕ್ಷರಾಗಿದ್ದಾರೆ. ವಿಧಾನಪರಿಷತ್ ಸಭಾಪತಿ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಸಮಿತಿ, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್‌ರಾಜ್ ಸಂಸ್ಥೆಗಳ ಸಮಿತಿ ಅಧ್ಯಕ್ಷರಾಗಿ ಜಿ.ಸೋಮಶೇಖರ ರೆಡ್ಡಿ ನೇಮಕಗೊಂಡಿದ್ದಾರೆ.

ವಿಧಾನಸಭೆಯ ಅಂದಾಜು ಸಮಿತಿ ಅಧ್ಯಕ್ಷರಾಗಿ ಅಭಯ ಪಾಟೀಲ್, ಸರ್ಕಾರಿ ಭರವಸೆಗಳ ಸಮಿತಿ ಅಧ್ಯಕ್ಷರಾಗಿ ಬಸವನಗೌಡ ಪಾಟೀಲ್ ಯತ್ನಾಳ್, ಖಾಸಗಿ ವಿಧೇಯಕ ಹಾಗೂ ನಿರ್ಣಯ, ಅರ್ಜಿಗಳ ಸಮಿತಿ, ವಸತಿ ಸೌಕರ್ಯ ಸಮಿತಿಗಳ ಅಧ್ಯಕ್ಷರಾಗಿ ಉಪಸಭಾಧ್ಯಕ್ಷ ಚಂದ್ರಶೇಖರ ಮಾಮನಿ ಅವರನ್ನು ನೇಮಕಗೊಳಿಸಿ ಸಭಾಧ್ಯಕ್ಷ ವಿಶ್ವೇಶ್ವರಹೆಗಡೆ ಕಾಗೇರಿ ಆದೇಶ ಹೊರಡಿಸಿದ್ದಾರೆ.